# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:11ನೇ ಮಾರ್ಚ್, 2025**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಂತಾಪ ಸೂಚನೆಗಳು

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎಸ್. ನವೀನ್ ಹಾಗೂ ಶ್ರೀ ಶರವಣ ಟಿ.ಎ.** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 03(52+93) | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎನ್. ರವಿಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 06(02) | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಂಜುನಾಥ್ ಭಂಡಾರಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 32(239) | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 03. ಶೂನ್ಯವೇಳೆ ಪ್ರಸ್ತಾವಗಳು

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:04.03.2025ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

ನಾಲ್ಕನೇ ದಿನ

## 05. ಹದಿಹರೆಯದ ಮಕ್ಕಳು ಎದುರಿಸುತ್ತಿರುವ ಕೆಳಕಂಡ ಸಾಮಾನ್ಯ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳ ಬಗ್ಗೆ ಮುಂದುವರೆದ ವಿಶೇಷ ಚರ್ಚೆ.

1. ಸ್ವಾಭಿಮಾನ ಮತ್ತು ದೇಹದ ಚಿತ್ರಣ
2. ಒತ್ತಡ
3. ಬೆದರಿಸುವಿಕೆ
4. ಖಿನ್ನತೆ
5. ಸೈಬರ್ ವ್ಯಸನ
6. ಮದ್ಯಪಾನ ಮತ್ತು ಧೂಮಪಾನ
7. ಹದಿಹರೆಯದ ವಯಸ್ಸಿನಲ್ಲಿ ಗರ್ಭಧಾರಣೆ
8. ಅಪ್ರಾಪ್ತ ವಯಸ್ಕರ ಲೈಂಗಿಕತೆ
9. ಪ್ರತಿಭಟನೆಯ ನಡವಳಿಕೆಗಳು
10. ಸಮಾನಸ್ಕರ ಒತ್ತಡ ಮತ್ತು ಸ್ಪರ್ಧೆ

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಕುಶಾಲಪ್ಪ ಎಂ.ಪಿ.(ಸುಜಾ), ಎಸ್.ಎಲ್. ಭೋಜೇಗೌಡ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ, ಡಿ.ಎಸ್. ಅರುಣ್ ಮತ್ತು ಡಾ: ಧನಂಜಯ ಸರ್ಜಿ** ಅವರುಗಳು ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಕೊಡಗು ವಿಶ್ವವಿದ್ಯಾಲಯ ಸೇರಿದಂತೆ ಹಿಂದಿನ ಸರ್ಕಾರದಲ್ಲಿ ಸ್ಥಾಪಿಸಲಾಗಿದ್ದ ವಿಶ್ವವಿದ್ಯಾಲಯಗಳನ್ನು ಮುಚ್ಚಲು ತೀರ್ಮಾನಿಸಿರುವುದನ್ನು ಕೈಬಿಡಬೇಕೆಂದು ಹಾಗೂ ವಿದ್ಯಾರ್ಥಿಗಳ ಮತ್ತು ನಿರುದ್ಯೋಗಿಗಳ ಹಿತದೃಷ್ಟಿಯಿಂದ ಸದರಿ ವಿಶ್ವವಿದ್ಯಾಲಯಗಳನ್ನು ಅಭಿವೃದ್ಧಿಪಡಿಸಲು ಅನುದಾನವನ್ನು ಒದಗಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

02. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಆನೇಕಲ್ ತಾಲ್ಲೂಕಿನಲ್ಲಿ ಹಾಗೂ ಸರ್ಜಾಪುರ ಹೋಬಳಿಯಲ್ಲಿ ಹೊಸ ಕೈಗಾರಿಕೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ಪ್ರದೇಶವನ್ನು ಹಿಂಪಡೆಯುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಂ. ನಾಗರಾಜು** ಅವರು **"ಕಾಡುಗೊಲ್ಲ"** ಜನಾಂಗವನ್ನು ಹಿಂದುಳಿದ ವರ್ಗಗಳ ಪ್ರವರ್ಗ-ಎ ಮತ್ತು ಬಿ ಅಡಿಯಲ್ಲಿ ಸೇರ್ಪಡೆಗೊಳಿಸಿ ಆದೇಶಿಸಲಾಗಿದ್ದು, ಜಾತಿ ಪ್ರಮಾಣ ಪತ್ರ ನೀಡಲು ವಿಳಂಬವಾಗುತ್ತಿರುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಡಾ: ತಳವಾರ್ ಸಾಬಣ್ಣ, ಶೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ವೈ.ಎಂ. ಸತೀಶ್** ಅವರುಗಳು ರಾಜ್ಯದಲ್ಲಿ 2024-25ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳ ಅತಿವೃಷ್ಟಿ, ಅನಾವೃಷ್ಟಿ ಮತ್ತು ನೆಟೆ ರೋಗದಿಂದ ತೊಗರಿ ಬೆಳೆ ನಾಶವಾಗಿದ್ದು, ರೈತರು ಸಂಕಷ್ಟಕ್ಕೀಡಾಗಿರುವುದರಿಂದ ತೊಗರಿ ಬೆಳೆಗಾರರಿಗೆ ಬೆಂಬಲ ಬೆಲೆ ನಿಗದಿಪಡಿಸಿ ಕೂಡಲೇ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ಗ್ರಾಹಕರು ಸಾಲಪಡೆದಿದ್ದಾರೆನ್ನುವಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ರಾಮೋಜಿಗೌಡ** ಅವರು ಉನ್ನತ ಶಿಕ್ಷಣ ಪಡೆದು ಪ್ರಾಥಮಿಕ ಶಾಲೆಗಳಲ್ಲಿ ನಿವೃತ್ತಿಯ ಅಂಚಿನಲ್ಲಿರುವ 58 ಸಾವಿರ ಶಿಕ್ಷಕರುಗಳಿಗೆ ಸೇವಾ ಹಿರಿತನದ ಮೇರೆಗೆ ನಿಗದಿತ ಅವಧಿಯಲ್ಲಿ ಮುಂಬಡ್ತಿ ನೀಡುವ ಕುರಿತು ಪ್ರಸ್ತಾಪಿಸುವುದು.

೦4. **ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಶ್ರೀಮತಿ ಹೇಮಲತಾ ನಾಯಕ್** ಅವರುಗಳು ತುಂಗಭದ್ರ ನದಿ ತೀರದಲ್ಲಿ ದಿನಾಂಕ:06.03.2025ರಂದು ವಿದೇಶಿ ಪ್ರವಾಸಿಗರ ಮೇಲೆ ಅತ್ಯಾಚಾರವಾಗಿರುವುದಲ್ಲದೆ, ಮಾರಣಾಂತಿಕ ಹಲ್ಲೆ ನಡೆಸಿರುವುದು ಹಾಗೂ ತುಂಗಭದ್ರ ನದಿ ಸುತ್ತಲಿನ ಗ್ರಾಮದಲ್ಲಿ ಹೋಮ್‌ಸ್ಟೇಗಳನ್ನು ಅನಧಿಕೃತವಾಗಿ ನಡೆಸುತ್ತಿರುವ ಕುರಿತು ಪ್ರಸ್ತಾಪಿಸುವುದು.

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಅಡಿಕೆ ಬೆಳೆಗೆ ತಗುಲಿರುವ ಎಲೆಚುಕ್ಕಿ ಹಾಗೂ ಹಳದಿ ರೋಗವನ್ನು ತಡೆಗಟ್ಟುವ ಬಗ್ಗೆ ದಿನಾಂಕ:04.03.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:04(32)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಸ್ಮಾರ್ಟ್ ಸಿಟಿ ಯೋಜನೆಯ ಅನುಷ್ಠಾನದ ಬಗ್ಗೆ ದಿನಾಂಕ:04.03.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:09(81)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಂ. ನಾಗರಾಜು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 09. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಯುತರುಗಳಾದ:-**
**ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಕಿಶೋರ್ ಕುಮಾರ್ ಪುತ್ತೂರ್, ಕೇಶವ ಪ್ರಸಾದ್ ಎಸ್. ಹಾಗೂ ಇತರರು**

ಮೈಸೂರಿನ ಉದಯಗಿರಿಯಲ್ಲಿ ಏಕಾಏಕಿ ಒಂದೇ ಕೋಮಿನವರು ಪ್ರತಿಭಟನೆ ನಡೆಸಿ, ಪೊಲೀಸ್ ಠಾಣೆ, ವಾಹನ ಹಾಗೂ ಪೊಲೀಸ್‌ನವರ ಮೇಲೆ ದಾಳಿ ನಡೆಸಿರುವುದು ಹಾಗೂ ರಾಜ್ಯದಲ್ಲಿ ಹೆಚ್ಚುತ್ತಿರುವ ಕೊಲೆ, ಅತ್ಯಾಚಾರ, ಗಲಭೆಗಳಿಂದ ಜನಸಾಮಾನ್ಯರಲ್ಲಿ ಅಭದ್ರತೆಯ ವಾತಾವರಣ ನಿರ್ಮಾಣವಾಗಿರುವ ಕುರಿತು.

## 10. ವಿತ್ತೀಯ ಕಾರ್ಯಕಲಾಪ

2025–26ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**